## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ರಾಯಚೂರು ತಾಲ್ಲೂಕಿನ ವಿವಿಧ ಗ್ರಾಮಗಳಲ್ಲಿ ಉರ್ದು ಶಾಲೆಗಳು ಇಲ್ಲದ್ದಿದ್ದರು ಉರ್ದು ಶಾಲೆಗಳಲ್ಲಿ ಕುಡಿಯುವ ನೀರಿನ ಸರಬರಾಜು ಕಾಮಗಾರಿಗಳನ್ನು ಮಾಡಲಾಗಿದೆ ಎಂದು ತೋರಿಸಿ, ಲಕ್ಷಾಂತರ ರೂ ಗಳನ್ನು ದುರುಪಯೋಗ ಪಡಿಸಿಕೊಂಡಿರುತ್ತಾರೆಂಬ ಆರೋಪಗಳಿಗೆ ಸಂಬಂಧಿಸಿದಂತೆ ಮಾನ್ಯ ಉಪಲೋಕಾಯುಕ್ತರ ಕಲಂ 12(3) ರ ವರದಿ, ವಿವರವಾದ ವಿಚಾರಣೆಗೆ ಪ್ರಕರಣವನ್ನು ಮಾನ್ಯ ಉಪಲೋಕಾಯುಕ್ತರಿಗೆ ವಹಿಸುವ ಬಗ್ಗೆ –ಆದೇಶ.

ಓದಲಾಗಿದೆ

1. ನಿಬಂಧಕರು, ಕರ್ನಾಟಕ ಲೋಕಾಯುಕ್ತ ಕಛೇರಿ, ಬೆಂಗಳೂರು ಇವರ ಅ.ಸ.ಪ.ಸಂಖ್ಯೆ:ಕಂಪ್ಲೇಟ್/ಉಪಲೋಕ್/ಜಿ.ಎಲ್.ಬಿ/3609/2015/ಎಆರ್‌ಇ-5, ದಿನಾಂಕ:.12.12.2016.
2. ಮಾನ್ಯ ಉಪ ಲೋಕಾಯುಕ್ತ-1ರವರ ಲೋಕಾಯುಕ್ತ ಕಾಯ್ದೆ ಕಲಂ 12(3) ರನ್ವಯ ವರದಿ ಸಂಖ್ಯೆ: ಕಂಪ್ಲೇಟ್/ಉಪಲೋಕ್/ ಜಿಎಲ್‌ಬಿ/3609/2015/ಎಆರ್‌ಇ-5, ದಿನಾಂಕ:.09.12.2016.

ಪ್ರಸ್ತಾವನೆ:-

ನಿಬಂಧಕರು, ಕರ್ನಾಟಕ ಲೋಕಾಯುಕ್ತ ಕಛೇರಿ, ಬೆಂಗಳೂರು ರವರು ಮೇಲೆ ಓದಲಾದ ಕ್ರಮ ಸಂಖ್ಯೆ(1) ರ ದಿನಾಂಕ:12.12.16 ರ ಅರೆ ಸರ್ಕಾರಿ ಪತ್ರದ ಜೊತೆ ಮೇಲೆ ಕ್ರಮ ಸಂಖ್ಯೆ(2) ರಲ್ಲಿ ಓದಲಾದ ಮಾನ್ಯ ಉಪ ಲೋಕಾಯುಕ್ತ-1ರವರ ದಿನಾಂಕ:9.12.2016 ರ ಲೋಕಾಯುಕ್ತ ಕಾಯ್ದೆಯ ಕಲಂ 12(3)ರ ವರದಿ ಹಾಗೂ ಇತರೆ ದಾಖಲೆಗಳನ್ನು ಲಗತ್ತಿಸಿ, ಸರ್ಕಾರಕ್ಕೆ ಕಳುಹಿಸಿ, ಮಾನ್ಯ ಉಪ ಲೋಕಾಯುಕ್ತ-1ರವರ ವರದಿಯನುಸಾರ ಕೂಡಲೇ ಕ್ರಮ ಕೈಗೊಳ್ಳುವಂತೆ ಕೋರಿರುತ್ತಾರೆ.

ಮಾನ್ಯ ಉಪಲೋಕಾಯುಕ್ತರ ಕಲಂ 12(3) ರ ವರದಿಯನ್ನು ಪರಿಶೀಲಿಸಲಾಗಿ, ಶ್ರೀ ಬಸವರಾಜ್ ಗಾರಲದಿನ್ನಿ ತಂದೆ ಮಲ್ಲಯ್ಯ, ಗಾರಲದಿನ್ನಿ ಗ್ರಾಮ, ರಾಯಚೂರು ತಾಲ್ಲೂಕು ಇವರು ಶ್ರೀ ಬಿ.ಆರ್.ಗೌಡರ್, ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಗ್ರಾಮೀಣಾ ಕುಡಿಯುವ ನೀರು ಮತ್ತು ನೈರ್ಮಲ್ಯ ಉಪವಿಭಾಗ, ರಾಯಚೂರು ಇವರ ವಿರುದ್ಧ ಮಾನ್ಯ ಲೋಕಾಯುಕ್ತಕ್ಕೆ ದೂರನ್ನು ಸಲ್ಲಿಸಿ, ರಾಯಚೂರು ತಾಲ್ಲೂಕಿನ ವಿವಿಧ ಗ್ರಾಮಗಳಲ್ಲಿ ಉರ್ದು ಶಾಲೆಗಳು ಇಲ್ಲದ್ದಿದ್ದರು ಉರ್ದು ಶಾಲೆಗಳಲ್ಲಿ ಕುಡಿಯುವ ನೀರಿನ ಸರಬರಾಜು ಕಾಮಗಾರಿಗಳನ್ನು ಮಾಡಲಾಗಿದೆ ಎಂದು ತೋರಿಸಿ, ಲಕ್ಷಾಂತರ ರೂಗಳನ್ನು ದುರುಪಯೋಗ ಪಡಿಸಿಕೊಂಡಿರುತ್ತಾರೆಂದು ಆರೋಪಿಸಿರುತ್ತಾರೆ.

ಮಾನ್ಯ ಉಪಲೋಕಾಯುಕ್ತರು ಸದರಿ ದೂರಿನ ಕುರಿತು ಲೋಕಾಯುಕ್ತ ಕಾಯ್ದೆ ಕಲಂ 9 ರನ್ವಯ ತನಿಖೆ ಕೈಗೊಂಡು ಪೊಲೀಸ್ ಅಧೀಕ್ಷಕರು, ಕರ್ನಾಟಕ ಲೋಕಾಯುಕ್ತ, ರಾಯಚೂರು ಇವರಿಂದ ವರದಿ ಪಡೆದಿದ್ದು, ತನಿಖಾ ವರದಿಯಲ್ಲಿ ತಿಳಿಸಿರುವಂತೆ ಈ ಕೆಳಕಂಡ ಒಟ್ಟು 8 ಮಂದಿ ಅಧಿಕಾರಿಗಳ ವಿರುದ್ಧ ಆರೋಪಗಳು ಕಂಡು ಬಂದಿರುತ್ತವೆ ಎಂದು ವರದಿಯಲ್ಲಿ ತಿಳಿಸಲಾಗಿದೆ.

1. ಶ್ರೀ ಬಿ.ಆರ್.ಗೌಡೂರ, ಹಿಂದಿನ ಪ್ರಭಾರಿ,ಕಾರ್ಯಪಾಲಕ ಇಂಜಿನಿಯರ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವಿಭಾಗ, ರಾಯಚೂರು.
2. ಶ್ರೀ ಮಲ್ಲಿಕಾರ್ಜುನ ಸಾಹು, ಹಿಂದಿನ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ರಾಯಚೂರು.
3. ಶ್ರೀ ಜಿ.ಎನ್.ಪ್ರಕಾಶ್, ಹಿಂದಿನ ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಪಂ.ರಾ.ಇಂ ಉಪವಿಭಾಗ, ರಾಯಚೂರು.

---2

4. ಶ್ರೀ ಶರಣೇಗೌಡ, ಕಿರಿಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ರಾಯಚೂರು.
5. ಶ್ರೀ ಮೊಹಮ್ಮದ್ ಮೋಸಿನ್, ಕಿರಿಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ರಾಯಚೂರು.
6. ಶ್ರೀ ಬಾಬುರಾವ್, ಕಿರಿಯ ಇಂಜಿನಿಯರ್ ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ರಾಯಚೂರು.
7. ಶ್ರೀ ರಾಮಚಂದ್ರ, ಕ್ಷೇತ್ರ ಶಿಕ್ಷಣಾಧಿಕಾರಿ, ರಾಯಚೂರು.
8. ಶ್ರೀಮತಿ ಸುಜಾತ ಎಂ. ಟ್ರೈನೇಡ್ ಗ್ರಾಜ್ಯೂಯಟ್ ಟೀಚರ್, ಸರ್ಕಾರಿ ಹಿರಿಯ ಪ್ರಾಥಮಿಕ ಪಾಠಶಾಲೆ ಜಾಗೀರ್ ವೆಂಕಟಾಪುರ.

ಮೇಲೆ ತಿಳಿಸಿರುವ ಅಧಿಕಾರಿ ನೌಕರರ ಪೈಕಿ ಕ್ರಮ ಸಂಖ್ಯೆ (1) ರಲ್ಲಿನ ಶ್ರೀ ಬಿ.ಆರ್.ಗೌಡೂರ ಇವರ ವಿರುದ್ಧ 2013-14 ನೇ ಸಾಲಿನ ರಾಯಚೂರು ತಾಲ್ಲೂಕಿನಲ್ಲಿ ಎನ್.ಆರ್.ಡಿ.ಡಬ್ಲ್ಯೂ.ಪಿ ಯೋಜನೆಯಡಿ ಕಾಮಗಾರಿಗಳಲ್ಲಿ ಅವ್ಯವಹಾರವಾಗಿದ್ದರೂ ಅದನ್ನು ತೋರ್ಪಡಿಸದೇ ಕಾಮಗಾರಿಗಳು ತೃಪ್ತಿಕರವಾಗಿ ನಿರ್ವಹಿಸಲಾಗಿದೆ ಎಂದು ವರದಿ ಸಲ್ಲಿಸಿ, ಕರ್ತವ್ಯ ಲೋಪವೆಸಗಿರುವ ಆರೋಪವನ್ನು ಮಾಡಲಾಗಿದೆ. ಉಳಿದ, ಕ್ರಮ ಸಂಖ್ಯೆ(2) ರಿಂದ (6) ರವರಗಿನ ಅಧಿಕಾರಿ/ನೌಕರರಗಳ ವಿರುದ್ಧ ಕುಡಿಯುವ ನೀರು ಸರಬರಾಜು ಸಂಬಂಧಿಸಿದಂತೆ ಗ್ರಾಮಗಳಲ್ಲಿ ಇಲ್ಲದೇ ಇರುವ ಉರ್ದು ಶಾಲೆಗೆ ಮತ್ತು ಒಂದೇ ಶಾಲೆಗೆ ಎರಡು ಕಾಮಗಾರಿಗಳಿರುವಂತೆ ನ್ಯೂನತೆಗಳಿರುವ ಕ್ರಿಯಾ ಯೋಜನೆ ತಯಾರಿಸಿ ಕರ್ತವ್ಯಲೋಪವೆಸಗಿರುವುದು, ಕ್ರಿಯಾ ಯೋಜನೆಯಲ್ಲಿನ ಜಾಗೀರವೆಂಕಟಾಪುರದದ ಗ್ರಾಮದ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಕಾಮಗಾರಿ ಮಾಡದೇ ಹಣ ಪಾವತಿಸಿರುವುದು, ಕಾಮಗಾರಿಗಳನ್ನು ಅಂದಾಜು ಪ್ರಕಾರ ಪರಿಮಾಣದ ಸಾಮಗ್ರಿಗಳನ್ನು ಬಳಸದೇ ಕಡಿಮೆ ಪರಿಮಾಣದ ಸಾಮಗ್ರಿಗಳನ್ನು ಬಳಸಿ, ಹಣವನ್ನು ಸೆಳೆದು ದುರುಪಯೋಗಪಡಿಸಿಕೊಂಡಿರುವ ಆರೋಪವು ಕಂಡು ಬಂದಿರುತ್ತದೆ ಎಂದು ತಿಳಿಸಲಾಗಿದೆ.

ಶ್ರೀ ರಾಮಚಂದ್ರ, ಕ್ಷೇತ್ರ ಶಿಕ್ಷಣಾಧಿಕಾರಿ, ರಾಯಚೂರು ಇವರು ವಿರುದ್ಧ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ರಾಯಚೂರು ಇವರಿಂದ ನಿರ್ದೇಶನ ಇದ್ದರೂ ಸಂಬಂದಿಸಿದ ಗ್ರಾಮಗಳಿಗೆ ಬೇಟಿ ಕೊಟ್ಟು ಪರಿಶೀಲನೆ ನಡೆಸದೆ ವಿವರವಾದ ವರದಿಯನ್ನು ನೀಡದೆ ಬೇಜವಾಬ್ದಾರಿ ಉತ್ತರವನ್ನು ನೀಡಿ ಕರ್ತವ್ಯಲೋಪವೆಸಗಿರುತ್ತಾರೆಂದು ತಿಳಿಸಲಾಗಿದೆ. ಶ್ರೀಮತಿ ಸುಜಾತ ಎಂ. ಟ್ರೈನೇಡ್ ಗ್ರಾಜ್ಯೂಯಟ್ ಟೀಚರ್ ಇವರಿಗೆ ಸಂಬಂಧಿಸಿದಂತೆ ಜಾಗೀರ್‌ವೆಂಕಟಾಪುರ ಗ್ರಾಮದಲ್ಲಿ ಕಾಮಗಾರಿಯನ್ನು ನಿರ್ವಹಿಸದೇ ಇದ್ದರೂ ಕಾಮಗಾರಿಯನ್ನು ಹಸ್ತಾಂತರಿಸಿಕೊಂಡ ಪತ್ರಕ್ಕೆ ಸಹಿ ಮಾಡಿ ಕರ್ತವ್ಯ ಲೋಪವೆಸಗಿರುವ ಆರೋಪವು ಕಂಡು ಬಂದಿರುತ್ತದೆ ಎಂದು ತಿಳಿಸಲಾಗಿದೆ.

ಮಾನ್ಯ ಉಪಲೋಕಾಯುಕ್ತರು ಎಲ್ಲಾ 8 ಮಂದಿಯಿಂದ ಆಕ್ಷೇಪಣೆ ಕೋರಿದ್ದು ಅವರ ಪೈಕಿ (1) ಶ್ರೀ ಬಿ.ಆರ್.ಗೌಡೂರ, ಸ.ಕಾ.ಇಂ (2) ಜಿ.ಎನ್.ಪ್ರಕಾಶ್, ಸ.ಕಾ.ಇಂ (3) ಬಾಬುರಾವ್, ಕಿ.ಇಂ ಮತ್ತು ಶ್ರೀಮತಿ ಸುಜಾತ, ಟೀಚರ್ ಇವರು ವಿವರಣೆಯಲ್ಲಿ ಸಲ್ಲಿಸಿ, ಆರೋಪಗಳನ್ನು ಕೈ ಬಿಡಲು ಕೋರಿರುತ್ತಾರೆಂದು, ಅದರೆ ಅವರು ವಿವರಣೆಯೊಂದಿಗೆ ಯಾವುದೇ ಕಾರಣವನ್ನು ತೋರಿಸದೇ ಇರುವುದರಿಂದ ಅವರ ಆಕ್ಷೇಪಣೆಯನ್ನು ಒಪ್ಪುವುದಕ್ಕಾವುದಿಲ್ಲವೆಂದು ಉಳಿದ ಆರೋಪಿತರ ಯಾವುದೇ ವಿವರಣೆಯನ್ನು ಸಲ್ಲಿಸಿರುವುದಿಲ್ಲವೆಂದು ತಿಳಿಸಿರುತ್ತಾರೆ. ಅಪಾದಿತರು ಸರ್ಕಾರಿ ನೌಕರರಾಗಿದ್ದು ಅವರುಗಳು ತಮ್ಮ ಕರ್ತವ್ಯ ನಿರ್ವಹಣೆಯಲ್ಲಿ ಪೂರ್ಣ ಪ್ರಮಾಣದ ಕರ್ತವ್ಯ ನಿಷ್ಠೆ ಪ್ರಾಮಾಣಿಕತೆ ತೋರದೆ ಸರ್ಕಾರಿ ನೌಕರರಿಗೆ ತರವಲ್ಲದ ರೀತಿ ವರ್ತಿಸಿರುವುದು ಕಾಮಗಾರಿಯನ್ನು ನಿರ್ವಹಿಸದೇ ಇದ್ದು ಸುಳ್ಳು ದಾಖಲೆಗಳನ್ನು ಬರೆದು ಹಣ ಪಾವತಿಸಿ, ಸರ್ಕಾರದ ಹಣವನ್ನು

---3

ದುರುಪಯೋಗಪಡಿಸಿಕೊಂಡಿರುವುದು ಕಂಡು ಬರುತ್ತದೆಯೆಂದು ಈ ರೀತಿಯಾಗಿ ಆರೋಪಿತರು ಕ.ನಾ.ಸೇ (ನಡತೆ) ನಿಯಮಗಳ 1966 ರ ನಿಯಮ 3(1) ನ್ನು ಉಲ್ಲಂಘಿಸಿರುವುದು ಮೇಲ್ನೋಟಕ್ಕೆ ಕಂಡು ಬರುತ್ತದೆ ಎಂದು ಆದ್ದರಿಂದ, ಸದರಿಯವರ ವಿರುದ್ಧ ವಿವರವಾದ ಇಲಾಖಾ ವಿಚಾರಣೆ ನಡೆಸಲು ಪ್ರಕರಣವನ್ನು ತಮಗೆ ವಹಿಸುವಂತೆ ಮಾನ್ಯ ಉಪಲೋಕಾಯುಕ್ತರು ಸರ್ಕಾರವನ್ನು ಕೋರಿರುತ್ತಾರೆ.

ಮಾನ್ಯ ಉಪಲೋಕಾಯುಕ್ತರ ವರದಿ ಇನ್ನಿತರ ದಾಖಲೆಗಳನ್ನು ಸರ್ಕಾರವು ಪರಿಶೀಲಿಸಿರುತ್ತದೆ. ಉರ್ದು ಶಾಲೆಗಳು ಅಸ್ತಿತ್ವದಲ್ಲಿ ಇಲ್ಲದಿದ್ದರೂ ಅವುಗಳು ಇರುವಂತೆ ದಾಖಲೆಗಳನ್ನು ತಯಾರಿಸಿ, ಅವುಗಳಿಗೆ ಕುಡಿಯುವ ನೀರಿನ ಕಾಮಗಾರಿಯನ್ನು ಕೈಗೊಳ್ಳಲು ಕ್ರಿಯಾ ಯೋಜನೆಯನ್ನು ಸಿದ್ಧಪಡಿಸಿ, ಕಾಮಗಾರಿಯನ್ನು ಪೂರ್ಣಗೊಳಿಸಿರುವಂತೆ ಬಿಲ್‌ಗಳನ್ನು ತಯಾರಿಸಿ, ಹಣ ಪಾವತಿಸಿರುವುದು ಕಂಡು ಬರುತ್ತದೆ. ಈ ಪ್ರಕ್ರಿಯೆಯಲ್ಲಿ ಮೇಲೆ ತಿಳಿಸಿರುವ 8 ಮಂದಿ ಅಧಿಕಾರಿ/ನೌಕರರು ವಿವಿಧ ಹಂತಗಳಲ್ಲಿ ಕರ್ತವ್ಯಲೋಪ, ಬೇಜವ್ದಾರಿ, ವಂಚನೆ ಎಸಗಿರುವುದು ಮೇಲ್ನೋಟಕ್ಕೆ ಕಂಡು ಬಂದಿರುತ್ತದೆ. ಎಲ್ಲಾ ಆರೋಪಿತರು ಸರ್ಕಾರಿ ನೌಕರರಾಗಿದ್ದು, ತಮ್ಮ ಕರ್ತವ್ಯ ನಿರ್ವಹಣೆಯಲ್ಲಿ ಪೂರ್ಣಪ್ರಮಾಣದ ಕರ್ತವ್ಯ ನಿಷ್ಠೆ, ಪ್ರಾಮಾಣಿಕತೆ ತೋರದೆ, ಸರ್ಕಾರಿ ನೌಕರರಿಗೆ ತರವಲ್ಲದ ರೀತಿ ವರ್ತಿಸಿರುವುದು, ಈ ರೀತಿಯಾಗಿ ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮಗಳು 1966 ರ ನಿಯಮ 3(1)ನ್ನು ಉಲ್ಲಂಘಿಸಿರುವುದು ಮೇಲ್ನೋಟಕ್ಕೆ ಕಂಡು ಬರುತ್ತದೆ.

ಮಾನ್ಯ ಉಪಲೋಕಾಯುಕ್ತರು ವರದಿಯಲ್ಲಿ ತಿಳಿಸಿರುವ ಶ್ರೀ ರಾಮಚಂದ್ರ, ಕ್ಷೇತ್ರ ಶಿಕ್ಷಣಾಧಿಕಾರಿ, ರಾಯಚೂರು. ಮತ್ತು ಶ್ರೀಮತಿ ಸುಜಾತ ಎಂ. ಟ್ರೈನೇಡ್ ಗ್ರಾಜ್ಯೂಯಟ್ ಟೀಚರ್, ಇವರು ಶಿಕ್ಷಣ ಇಲಾಖೆಗೆ ಸೇರಿದ ಅಧಿಕಾರಿ/ನೌಕರರಾಗಿದ್ದು ಅವರುಗಳ ವಿರುದ್ಧ ಇಲಾಖೆ ವಿಚಾರಣೆ ನಡೆಸಲು ಅನುಮತಿ/ಆದೇಶ ನೀಡಲು ಪ್ರಸ್ತಾವನೆಯನ್ನು ಮುಂದಿನ ಕ್ರಮಕ್ಕಾಗಿ ಶಿಕ್ಷಣ ಇಲಾಖೆಗೆ ಕಳುಹಿಸಲಾಗಿದೆ.

ಉಳಿದ 6 ಮಂದಿ ವಿರುದ್ಧದ ಆರೋಪಗಳಿಗೆ ಸಂಬಂಧಿಸಿದಂತೆ ವಿವರವಾದ ಇಲಾಖಾ ವಿಚಾರಣೆಯನ್ನು ಮಾನ್ಯ ಉಪಲೋಕಾಯುಕ್ತ-1ರವರಿಗೆ ವಹಿಸಲು ಸರ್ಕಾರದ ಗ್ರಾ.ಅ.ಪಂ.ರಾಜ್ ಇಲಾಖೆಯು ನಿರ್ಧರಿಸಿರುತ್ತದೆ. ಆದ್ದರಿಂದ ಈ ಆದೇಶ.

**<u>ಆದೇಶ ಸಂಖ್ಯೆ:ಗ್ರಾಅಪ 170 ಇಎನ್‌ಕ್ಯೂ 16, ಬೆಂಗಳೂರು, ದಿನಾಂಕ:10.01.2017</u>**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ, ಶ್ರೀ ಮಲ್ಲಿಕಾರ್ಜುನ ಸಾಹು, ಹಿಂದಿನ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ ರಾಯಚೂರು (ಇವರು ದಿನಾಂಕ:31.12.2015 ರಂದು ಸೇವೆಯಿಂದ ವಯೋ ನಿವೃತ್ತಿ ಹೊಂದಿರುತ್ತಾರೆ) ಇವರ ವಿರುದ್ಧದ ಆರೋಪಗಳಿಗೆ ಸಂಬಂಧಿಸಿದಂತೆ ವಿವರವಾದ ಇಲಾಖೆ ವಿಚಾರಣೆಯನ್ನು ಕರ್ನಾಟಕ ನಾಗರೀಕ ಸೇವಾ (ವ.ನಿ.ಮೇ) ನಿಯಮಗಳು 11 ಮತ್ತು 11-ಎ ರಡಿ ನಡೆಸಲು ಕರ್ನಾಟಕ ನಾಗರೀಕ ಸೇವಾ ನಿಯಮಗಳು, ನಿಯಮ 214(2)(ಬಿ) ರಡಿ ಮಂಜೂರಾತಿ ನೀಡಿದೆ.

ಶ್ರೀ ಮಲ್ಲಿಕಾರ್ಜುನ ಸಾಹು, ಹಿಂದಿನ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ ರಾಯಚೂರು ಇವರನ್ನು ಒಳಗೊಂಡಂತೆ ಈ ಕೆಳಕಂಡ ಅಧಿಕಾರಿ/ನೌಕರ ವಿರುದ್ಧ ಕಂಡು ಬಂದಿರುವ ಆರೋಪಗಳಿಗೆ ಸಂಬಂದಿಸಿದಂತೆ ವಿವರವಾದ ಇಲಾಖಾ ವಿಚಾರಣೆಯನ್ನು ಕ.ನಾ.ಸೇ (ವ.ನಿ.ಮೇ) ನಿಯಮಗಳು

---4

1957 ರ ನಿಯಮ 11 ರ ವಿಧಿ ವಿಧಾನಗಳ ಅನುಸಾರ ನಡೆಸಲು ಪ್ರಕರಣವನ್ನು ನಿಯಮ 14-ಎ ರಡಿ ಮಾನ್ಯ ಉಪಲೋಕಾಯುಕ್ತ-1 ರವರಿಗೆ ವಹಿಸಿದೆ.

1. ಶ್ರೀ ಬಿ.ಆರ್.ಗೌಡೂರ, ಹಿಂದಿನ ಪ್ರಭಾರಿ,ಕಾ.ಇಂ, ಗ್ರಾ.ಕು.ನೀ ಮತ್ತು ನೈ. ವಿಭಾಗ, ರಾಯಚೂರು.
2. ಶ್ರೀ ಜಿ.ಎನ್.ಪ್ರಕಾಶ್, ಹಿಂದಿನ ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಪಂ.ರಾ.ಇಂ ಉಪವಿಭಾಗ, ರಾಯಚೂರು.
3. ಶ್ರೀ ಶರಣೇಗೌಡ, ಕಿರಿಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ರಾಯಚೂರು
4. ಶ್ರೀ ಮೊಹಮ್ಮದ್ ಮೋಸಿನ್, ಕಿರಿಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ರಾಯಚೂರು.
5. ಶ್ರೀ ಬಾಬುರಾವ್, ಕಿರಿಯ ಇಂಜಿನಿಯರ್ ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ರಾಯಚೂರು.

ಶ್ರೀ ರಾಮಚಂದ್ರ, ಕ್ಷೇತ್ರ ಶಿಕ್ಷಣಾಧಿಕಾರಿ, ರಾಯಚೂರು. ಮತ್ತು ಶ್ರೀಮತಿ ಸುಜಾತ ಎಂ, ಟ್ರೈನೇಡ್ ಗ್ರಾಜ್ಯೂಯಟ್ ಟೀಚರ್, ಇವರು ಶಿಕ್ಷಣ ಇಲಾಖೆಗೆ ಸೇರಿದ ಅಧಿಕಾರಿ/ನೌಕರರಾಗಿದ್ದು ಅವರುಗಳ ವಿರುದ್ಧ ಇಲಾಖೆ ವಿಚಾರಣೆ ನಡೆಸಲು ಅನುಮತಿ/ಆದೇಶ ನೀಡಲು ಪ್ರಸ್ತಾವನೆಯನ್ನು ಶಿಕ್ಷಣ ಇಲಾಖೆಗೆ ಕಳುಹಿಸಲಾಗಿದ್ದು, ಅಗತ್ಯ ಮಾಹಿತಿಗಾಗಿ ಸದರಿ ಇಲಾಖೆಯನ್ನು ಸಂಪರ್ಕಿಸುವಂತೆ ಮಾನ್ಯ ಉಪಲೋಕಾಯುಕ್ತ-1ರವರಗೆ ತಿಳಿಸಿದೆ.

ಕರ್ನಾಟಕ ರಾಜ್ಯ ಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಸಿದ್ದೇಶ ಪೊಲೀಸ್‌ಕಟ್ಟಿ)
ಸರ್ಕಾರದ ಅಧೀನ ಕಾರ್ಯದರ್ಶಿ(ಸೇವೆಗಳು-ಎ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

<u>ಇವರಿಗೆ:</u>

1. ಮಹಾಲೇಖಪಾಲರು,(ಲೆಕ್ಕ ಪತ್ರ 1&2)/(ಆಡಿಟ್) ಕರ್ನಾಟಕ, ಬೆಂಗಳೂರು.
2. ನಿಬಂಧಕರು, ಕರ್ನಾಟಕ ಲೋಕಾಯುಕ್ತ ಕಛೇರಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
3. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಬೆಂಗಳೂರು.
4. ಮುಖ್ಯ ಇಂಜಿನಿಯರ್, ಗ್ರಾಮೀಣಾ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ, ಕಾವೇರಿ ಭವನ, ಬೆಂಗಳೂರು.
5. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ರಾಯಚೂರು.
6. ಮುಖ್ಯ ಇಂಜಿನಿಯರ್, ಸಂಪರ್ಕ ಮತ್ತು ಕಟ್ಟಡಗಳು, ಕೆ.ಆರ್.ವೃತ್ತ, ಬೆಂಗಳೂರು
7. ಸರ್ಕಾರದ ಅಧೀನ ಕಾರ್ಯದರ್ಶಿ, ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲ ಸಾರಿಗೆ ಇಲಾಖೆ, (ಸೇವೆಗಳು-ಎ ಮತ್ತು ಸಿ).
8. ಸಂಬಂಧಿಸಿದ ಅಧಿಕಾರಿ/ನೌಕರರಿಗೆ (ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲ ಪಂಚಾಯತ್, ರಾಯಚೂರು ಇವರ ಮುಖಾಂತರ)
9. ಮಾನ್ಯ ಗ್ರಾ.ಅ.ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿಯವರು
10. ಗ್ರಾ.ಅ.ಪಂ.ರಾಜ್ ಇಲಾಖೆಯ ಪ್ರಧಾನ ಕಾರ್ಯದರ್ಶಿ /ಜಂಟಿ ಕಾರ್ಯದರ್ಶಿ/ ಇವರ ಆಪ್ತ ಕಾರ್ಯದರ್ಶಿ/ಆಪ್ತ ಸಹಾಯಕರು
11. ಶಾಖಾ ರಕ್ಷಾ ಕಡತ/ಕಂಪ್ಯೂಟರ್ ಸೆಲ್/ ಹೆಚ್ಚುವರಿ ಪ್ರತಿ.